ಉತ್ತರ ಕನ್ನಡ ಜಿಲ್ಲಾ ಪಂಚಾಯತ
ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆಯ ಉಪನಿರ್ದೇಶಕರ ಕಾರ್ಯಾಲಯ, ಉತ್ತರ ಕನ್ನಡ, ಕಾರವಾರ.
ದೂರವಾಣಿ ಸಂಖ್ಯೆ: 08382-221345
E-mail: ddpi.kwr@gmail.com

ದಿನಾಂಕ: 28-08-2026

ಸಂಖ್ಯೆ:ಪಿ2/ಇತರೆ/05/2026-27

## ಜ್ಞಾಪನ

ವಿಷಯ: ದಿನಾಂಕ:09/09/2026ರಂದು ಪ್ರೌಢ ಶಾಲೆಯ ವಿದ್ಯಾರ್ಥಿ-ವಿದ್ಯಾರ್ಥಿನಿಯರಿಗೆ ಜಿಲ್ಲಾ ಮಟ್ಟದ ಪ್ರಬಂಧ ಸ್ಪರ್ಧೆ ಏರ್ಪಡಿಸುವ್ವದರ ಕುರಿತು.

ಉಲ್ಲೇಖ: ಮುಖ್ಯ ಕಾರ್ಯನಿರ್ವಾಹಣಾಧಿಕಾರಿಗಳು, ಉತ್ತರ ಕನ್ನಡ ಜಿಲ್ಲಾ ಸಹಕಾರ ಯೂನಿಯನ್ ನಿ.,ಕುಮಟಾರವರ ಪತ್ರ ಸಂಖ್ಯೆ: ಜಿ.ಸ.ಯೂ/22/02/2026-2027 ದಿ:20/08/2026.

*****

ಈ ಮೇಲಿನ ವಿಷಯ ಹಾಗೂ ಉಲ್ಲೇಖಿತ ಪತ್ರಕ್ಕೆ ಸಂಬಂಧಿಸಿದಂತೆ ಶಾಲಾ ಹಂತದಲ್ಲಿಯೇ ಸಹಕಾರ ಚಳುವಳಿಯ ಬಗ್ಗೆ ಅರಿವು ಮೂಡಿಸಲು ಉತ್ತರ ಕನ್ನಡ ಜಿಲ್ಲೆಯ ಎಲ್ಲಾ ಪ್ರೌಢಶಾಲೆಯ ವಿದ್ಯಾರ್ಥಿ-ವಿದ್ಯಾರ್ಥಿನಿಯರಿಗಾಗಿ ಸಹಕಾರ ವಿಷಯದ ಕುರಿತು ಪ್ರಬಂಧ ಸ್ಪರ್ಧೆಯನ್ನು ದಿನಾಂಕ:09/09/2026ರಂದು ಬುಧವಾರ ಬೆಳಿಗ್ಗೆ 10:30 ಗಂಟೆಗೆ ಡಾ. ಎ.ವಿ.ಬಾಳಿಗಾ ಕಲಾ ಮತ್ತು ವಿಜ್ಞಾನ ಕಾಲೇಜು, ಕುಮಟಾದಲ್ಲಿ ಏರ್ಪಡಿಸಿದ ಬಗ್ಗೆ ಮತ್ತು ಸದರಿ ಸ್ಪರ್ಧೆಯಲ್ಲಿ ಭಾಗವಹಿಸಲು ಇಬ್ಬರು ವಿದ್ಯಾರ್ಥಿ ಅಥವಾ ವಿದ್ಯಾರ್ಥಿನಿಯರನ್ನು ಕಳುಹಿಸಿ ಕೊಡುವಂತೆ ಉಲ್ಲೇಖಿತ ಪತ್ರದಲ್ಲಿ ಮುಖ್ಯ ಕಾರ್ಯನಿರ್ವಾಹಣಾಧಿಕಾರಿಗಳು, ಉತ್ತರ ಕನ್ನಡ ಜಿಲ್ಲಾ ಸಹಕಾರ ಯೂನಿಯನ್ ನಿ.,ಕುಮಟಾರವರ ರವರು ಕೋರಿರುತ್ತಾರೆ.

ಪ್ರಯುಕ್ತ ನಿಮ್ಮ ತಾಲೂಕಿನ ವ್ಯಾಪ್ತಿಯ ಎಲ್ಲಾ ಪ್ರೌಢಶಾಲೆಯ ವಿದ್ಯಾರ್ಥಿ-ವಿದ್ಯಾರ್ಥಿನಿಯರು ಪ್ರಬಂಧ ಸ್ಪರ್ಧೆಯಲ್ಲಿ ಭಾಗವಹಿಸಲು ಉಲ್ಲೇಖಿತ ಪತ್ರದ ಪ್ರಕಾರ ನಿಮ್ಮ ಹಂತದಲ್ಲೇ ನಿಯಮಾನುಸಾರ ಅಗತ್ಯ ಕ್ರಮ ವಹಿಸಲು ತಿಳಿಸಿದೆ.

ಉಪನಿರ್ದೇಶಕರು(ಆಡಳಿತ)
ಉತ್ತರ ಕನ್ನಡ, ಕಾರವಾರ
ಶಾಲಾ ಶಿಕ್ಷಣ ಇಲಾಖೆ

ಗೆ,

ಕ್ಷೇತ್ರ ಶಿಕ್ಷಣಾಧಿಕಾರಿಗಳು ಕಾರವಾರ, ಅಂಕೋಲಾ, ಕುಮಟಾ, ಹೊನ್ನಾವರ, ಭಟ್ಕಳರವರಿಗೆ ಸೂಕ್ತ ಕ್ರಮಕ್ಕಾಗಿ ಹಾಗೂ ಎಲ್ಲಾ ಪ್ರೌಢಶಾಲಾ ಮುಖ್ಯೋಧ್ಯಾಪಕರಿಗೆ ಕ್ಷೇತ್ರ ಶಿಕ್ಷಣಾಧಿಕಾರಿಗಳ ಮುಖಾಂತರ.

ಪ್ರತಿಯನ್ನು,

ಮುಖ್ಯ ಕಾರ್ಯನಿರ್ವಾಹಣಾಧಿಕಾರಿಗಳು, ಉತ್ತರ ಕನ್ನಡ ಜಿಲ್ಲಾ ಸಹಕಾರ ಯೂನಿಯನ್ ನಿ.,ಕುಮಟಾ.

Scanned with OKEN Scanner

ಉತ್ತರ ಕನ್ನಡ ಜಿಲ್ಲಾ ಸಹಕಾರ ಯೂನಿಯನ್ ನಿ., ಕುಮಟಾ
ಕೆ.ಡಿ.ಸಿ.ಸಿ ಬ್ಯಾಂಕ್ ಕಟ್ಟಡ, ಪ್ರಧಾನ ಅಂಚೆ ಕಛೇರಿ ರಸ್ತೆ, ಕುಮಟಾ-581343
Uttara Kannada District Co-operative Union Kumta
K.D.C.C Bank Building, Head Post Office Road, Kumta-581343
ದೂರವಾಣಿ: (08386) 222168 Email:nkdukmt@gmail.com

ದಿನಾಂಕ: 20-08-2026

ಸಂಖ್ಯೆ ಜಿ.ಸ.ಯೂ/22/ 02 /2026-2027,

ರಿಗೆ,
ಮಾನ್ಯ ಉಪ ನಿರ್ದೇಶಕರು
ಸಾರ್ವಜನಿಕ ಶಿಕ್ಷಣ ಇಲಾಖೆ
ಉಪನಿರ್ದೇಶಕರ ಕಛೇರಿ ಕಾರವಾರ

ವಿಷಯ : ದಿನಾಂಕ: 09-09-2026 ರಂದು ಪ್ರೌಢ ಶಾಲೆಯ ವಿದ್ಯಾರ್ಥಿ –ವಿದ್ಯಾರ್ಥಿನಿಯರಿಗೆ ಜಿಲ್ಲಾ ಮಟ್ಟದ ಪ್ರಬಂಧ ಸ್ಪರ್ಧೆ ಏರ್ಪಡಿಸುವುದರ ಕುರಿತು.
ಉಲ್ಲೇಖ: ಕ.ರಾ.ಸ.ಮ.ಮಂ.ಪತ್ರ ಸಂಖ್ಯೆ/ಸಶಿವಿ/ 94/125/2026-2027, ದಿನಾಂಕ:20.07.2026

ಮಾನ್ಯರೇ,

ಮೇಲ್ಕಾಣಿಸಿದ ವಿಷಯಕ್ಕೆ ಸಂಬಂಧಿಸಿದಂತೆ, ಶಾಲಾ-ಕಾಲೇಜು ಹಂತದಲ್ಲಿಯೇ ಸಹಕಾರ ಚಳುವಳಿಯ ಬಗ್ಗೆ ಅರಿವು ಮೂಡಿಸಲು ಉತ್ತರ ಕನ್ನಡ ಜಿಲ್ಲೆಯ ಎಲ್ಲಾ ಪ್ರೌಢ ಶಾಲೆಯ ವಿದ್ಯಾರ್ಥಿ – ವಿದ್ಯಾರ್ಥಿನಿಯರಿಗಾಗಿ ಸಹಕಾರ ವಿಷಯದ ಕುರಿತು ಪ್ರಬಂಧ ಸ್ಪರ್ಧೆಯನ್ನು ದಿನಾಂಕ: 09-09-2026 ರಂದು ಬುಧವಾರ ಬೆಳಿಗ್ಗೆ 10-30 ಗಂಟೆಗೆ ಡಾ. ಎ.ವಿ. ಬಾಳಿಗಾ ಕಲಾ ಮತ್ತು ವಿಜ್ಞಾನ ಕಾಲೇಜು ಕುಮಟಾದಲ್ಲಿ ಏರ್ಪಡಿಸಲಾಗಿದೆ.

ಆದ್ದರಿಂದ ಪ್ರೌಢ ಶಾಲೆಯ ಮುಖ್ಯೋಪಾಧ್ಯಾಯರು ಸದರಿ ವಿಷಯವನ್ನು ತಮ್ಮ ಶಾಲೆಯ ವಿದ್ಯಾರ್ಥಿಗಳಿಗೆ ಮನವರಿಕೆ ಮಾಡಿಕೊಟ್ಟು ಸದರಿ ಪ್ರಬಂಧ ಸ್ಪರ್ಧೆಯಲ್ಲಿ ಭಾಗವಹಿಸಲು ಇಬ್ಬರು ವಿದ್ಯಾರ್ಥಿ ಅಥವಾ ವಿದ್ಯಾರ್ಥಿನಿಯರನ್ನು ಕಳುಹಿಸಲು ಕೋರಲಾಗಿದೆ. ಪ್ರಬಂಧ ಸ್ಪರ್ಧೆಯಲ್ಲಿ ಭಾಗವಹಿಸಿದ ವಿದ್ಯಾರ್ಥಿಗಳಿಗೆ ಬಂದು ಹೋಗುವ ಸಾಮಾನ್ಯ ಬಸ್ ದರವನ್ನು ನೀಡಲಾಗುವುದು ಹಾಗೂ ಉಪಹಾರ ವ್ಯವಸ್ಥೆ ಮಾಡಲಾಗುವುದು.

ಜಿಲ್ಲಾ ಮಟ್ಟದ ಪ್ರಬಂಧ ಸ್ಪರ್ಧೆಯಲ್ಲಿ ಭಾಗವಹಿಸಿ ಅತೀ ಹೆಚ್ಚು ಅಂಕ ಪಡೆದ ಮೊದಲು ಮೂರು ವಿದ್ಯಾರ್ಥಿಗಳಿಗೆ ಪ್ರಶಸ್ತಿ ಪತ್ರವನ್ನು ನೀಡಲಾಗುವುದು ಹಾಗೂ ಮೂರು ಉತ್ತಮ ಪತ್ರಿಕೆಗಳನ್ನು ರಾಜ್ಯ ಮಟ್ಟದ ಆಯ್ಕೆಗೆ ಕಳುಹಿಸಿಕೊಡಲಾಗುವುದು. ರಾಜ್ಯ ಮಟ್ಟದಲ್ಲಿ ಆಯ್ಕೆಯಾದ ಮೂರು ವಿದ್ಯಾರ್ಥಿಗಳಿಗೆ ನಗದು ಬಹುಮಾನ ಹಾಗೂ ಪ್ರಶಸ್ತಿ ಪತ್ರ ನೀಡಲಾಗುವುದು.

ವಿಷಯ: " ಸಹಕಾರದ ಬಗ್ಗೆ ಜನಜಾಗೃತಿ ಉಂಟು ಮಾಡುವಲ್ಲಿ ಸಹಕಾರ ಶಿಕ್ಷಣ, ತರಬೇತಿ ಮತ್ತು ಪ್ರಚಾರದ ಪಾತ್ರ"

**" The role of cooperative education training and publicity in creating public awareness about cooperation. "**

ಕಾರಣ ಸದರಿ ಪ್ರಬಂಧ ಸ್ಪರ್ಧೆಗೆ ಹಾಜರಾಗಲು ಇಚ್ಛೆಯುಳ್ಳ ಇಬ್ಬರು ವಿದ್ಯಾರ್ಥಿ ಅಥವಾ ವಿದ್ಯಾರ್ಥಿನಿಯರ ಪೂರ್ಣ ಹೆಸರು, ಓದುತ್ತಿರುವ ತರಗತಿ ಇನ್ನಿತರ ಮಾಹಿತಿಗಳನ್ನು ನಮೂದಿಸಿ ಉತ್ತರ

Scanned with OKEN Scanner

ಕನ್ನಡ ಜಿಲ್ಲಾ ಸಹಕಾರ ಯೂನಿಯನ್ ನಿ., ಕುಮಟಾ. ಕೆ.ಡಿ.ಸಿ.ಸಿ. ಬ್ಯಾಂಕ್ ಬಿಲ್ಡಿಂಗ್ ಕುಮಟಾ. ಈ ಕಾರ್ಯಾಲಯಕ್ಕೆ ದಿನಾಂಕ: 07-09-2026 ರೊಳಗೆ ಕಳುಹಿಸಲು ಕೋರಲಾಗಿದೆ.

ಈ ಕುರಿತಂತೆ ಉತ್ತರ ಕನ್ನಡ ಜಿಲ್ಲಾ ಸಹಕಾರ ಯೂನಿಯನ್ ವತಿಯಿಂದ ಏರ್ಪಡಿಸಿರುವ ಜಿಲ್ಲಾ ಮಟ್ಟದ ಪ್ರಬಂಧ ಸ್ಪರ್ಧೆಯಲ್ಲಿ ಭಾಗವಹಿಸಲು ಜಿಲ್ಲೆಯ ಎಲ್ಲಾ ಪ್ರೌಢ ಶಾಲೆಯ ಮುಖ್ಯೋಪಾಧ್ಯಾಯರುಗಳು ಕಡ್ಡಾಯವಾಗಿ ತಮ್ಮ ಶಾಲೆಯ ಇಬ್ಬರು ವಿದ್ಯಾರ್ಥಿ/ ವಿದ್ಯಾರ್ಥಿನಿಯರನ್ನು ಕಳುಹಿಸಿಕೊಡಲು ವ್ಯವಸ್ಥೆ ಕಲ್ಪಿಸುವಂತೆ ಈ ಪ್ರಬಂಧ ಸ್ಪರ್ಧೆಯನ್ನು ಜಿಲ್ಲೆಯ ಶಾಲಾ ವಿದ್ಯಾರ್ಥಿಗಳಿಗೆ ನಡೆಸಲು ಅನುಮತಿಯನ್ನು ಈ ಮೂಲಕ ಕೋರಿದೆ.

ಶ್ರೀ ಗೋಪಾಲ ನಾಯಕ ಮುಖ್ಯ ಕಾರ್ಯಾನಿರ್ವಾಹಣಾಧಿಕಾರಿ- 9110684178
ಶ್ರೀ ದರ್ಶನ್ ಬಿ. ಗಾಂವಕರ್ ವ್ಯವಸ್ಥಾಪಕರು - 9148375475

ಸಹಕಾರ ವಿಷಯದ ಕುರಿತು ಈ ಕೆಳಗಿನ ಜಾಲ ತಾಣಗಳನ್ನು ಸಂಪರ್ಕಿಸಬಹುದು.

1. ಕೇಂದ್ರ ಸಹಕಾರ ಸಚಿವಾಲಯದ ಜಾಲ ತಾಣ.
2. ಕರ್ನಾಟಕ ಸರ್ಕಾರದ ಸಹಕಾರ ಸಿಂಧು ಜಾಲ ತಾಣ.
3. ಎನ್.ಸಿ.ಯು.ಐ

Gopal

ಗೋಪಾಲ ನಾಯಕ
ಮುಖ್ಯ ಕಾರ್ಯಾನಿರ್ವಾಹಣಾಧಿಕಾರಿ
ಉತ್ತರ ಕನ್ನಡ ಜಿಲ್ಲಾ ಸಹಕಾರ ಯೂನಿಯನ್ ನಿ,
ಕುಮಟಾ

Scanned with OKEN Scanner